## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 255(164) |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10.12.2024 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳು ಸಣ್ಣ ಜಾಗಗಳಲ್ಲಿ ಕಡು ಬಡವರಿಗೆ ಮನೆಯನ್ನು ಕಟ್ಟಲು ಸಿಂಗಲ್ ಸೈಟ್ ಲೇಔಟ್ ಅನುಮತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ಭೂ ಪರಿವರ್ತನೆಗೆ ತಾಂತ್ರಿಕ ಅಭಿಪ್ರಾಯ ನೀಡಿದ ನಂತರ ಜಿಲ್ಲಾಧಿಕಾರಿಗಳಿಂದ ಭೂ ಪರಿವರ್ತನೆಯಾದ ಎಲ್ಲಾ ರೀತಿಯ ಜಮೀನುಗಳಿಗೆ ನಿಯಮಾನುಸಾರ ದಾಖಲೆಗಳನ್ನು ಪಡೆದು ವಿನ್ಯಾಸ ನಕ್ಷೆಗಳಿಗೆ ಅನುಮೋದನೆ ನೀಡಲಾಗುತ್ತಿದೆ. |
| ಆ) | ಸಿಂಗಲ್ ಸೈಟ್ ಲೇಔಟ್‌ಗಾಗಿ ಮನವಿ ಸಲ್ಲಿಸಿದ ಎಷ್ಟು ದಿನಗಳ ಒಳಗಾಗಿ ಅನುಮತಿಯನ್ನು ಸಂಬಂಧಿತ ನಗರಾಭಿವೃದ್ಧಿ ಪ್ರಾಧಿಕಾರಗಳು ನೀಡುತ್ತವೆ; ಈ ಕುರಿತು ಇರುವ ನಿಯಮಗಳೇನು; | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ , 1961ರ ಕಲಂ 17 ರನ್ವಯ ವಿನ್ಯಾಸಗಳಿಗೆ ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮಗಳು, 1965ರ ನಿಯಮ 36(2) ರಂತೆ 90 ದಿನದೊಳಗಾಗಿ ಅನುಮೋದನೆ ನೀಡುವ ಅಥವಾ ತಿರಸ್ಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಇ) | ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು? | **ಇಲ್ಲ**<br>ವಿನ್ಯಾಸ ಅನುಮೋದನೆಯ ಪಾರದರ್ಶಕತೆ ಹಾಗೂ ಜನ ಸ್ನೇಹಿಯಾಗಿಸಲು Center for E-Governance ವತಿಯಿಂದ ಅಭಿವೃದ್ಧಿಪಡಿಸುತ್ತಿರುವ Unified Land Management System ತಂತ್ರಾಂಶದಲ್ಲಿ ಅಳವಡಿಸಲು ಕ್ರಮವಹಿಸಲಾಗುತ್ತಿದೆ. |

ಕಡತ ಸಂಖ್ಯೆ: ನಅಇ 66 ಎಲ್‌ಸಿಕ್ಯೂ 2024 (ಇ-ಕಡತ)

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು